# ಎನ್‌ಐಟಿಕೆ: ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆ



**ಮಂಗಳೂರು:** ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕರ್ನಾಟಕ (ಎನ್‌ಐಟಿಕೆ) ಸುರತ್ಕಲ್ ಕ್ಯಾಂಪಸ್‌ನಲ್ಲಿ ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆ ನಡೆಯಿತು.

ಇಸ್ರೋದ ಮಾಜಿ ನಿರ್ದೇಶಕ ಡಾ. ವೆಂಕಟಕೃಷ್ಣನ್ ಪಿ.ವಿ. ಭಾರತದ ಬಾಹ್ಯಾಕಾಶ ಸಾಧನೆಗಳು ಮತ್ತು ನಾವೀನ್ಯತೆ ಮತ್ತು ಸಹಯೋಗದ ಮಹತ್ವ ತಿಳಿಸಿ, ಪ್ರಮುಖ ಭಾಷಣ ಮಾಡಿದರು. ಎನ್‌ಐಟಿಕೆ ಸುರತ್ಕಲ್‌ನ ನಿರ್ದೇಶಕ ಪ್ರೊ.ಬಿ.ರವಿ ಮತ್ತು ಡೀನ್ (ಸಂಶೋಧನೆ ಮತ್ತು ಸಲಹೆ) ಪ್ರೊ.ಉದಯ ಭಟ್ ಕೆ. ಅವರು ಬಾಹ್ಯಾಕಾಶ ಸಂಶೋಧನೆ ಮತ್ತು ಅಭಿವೃದ್ಧಿಯ ಮಹತ್ವವನ್ನು ತಿಳಿಸಿದರು. ಕಾರ್ಯಕ್ರಮವು 10 ಕ್ಕೂ ಹೆಚ್ಚು ಶಾಲೆಗಳ ಭಾಗವಹಿಸುವಿಕೆಗೆ ಸಾಕ್ಷಿಯಾಯಿತು, ಸಮಾರಂಭದಲ್ಲಿ 400ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ನಂತರ ತಾಂತ್ರಿಕ ಸೆಷನ್‌ಗಳು, ಪ್ಯಾನಲ್ ಚರ್ಚೆಗಳು ಮತ್ತು ಪ್ರಾಜೆಕ್ಟ್ ಶೋಕೇಸ್‌ಗಳು, ವಿದ್ಯಾರ್ಥಿಗಳಿಗೆ ಬಾಹ್ಯಾಕಾಶ ಉದ್ಯಮದ ತಜ್ಞರೊಂದಿಗೆ ಸಂವಹನ ನಡೆಸಲು ವೇದಿಕೆಯನ್ನು ಒದಗಿಸಿದವು. ವಿದ್ಯಾರ್ಥಿಗಳು ಎನ್‌ಐಟಿಕೆಯ ವಿವಿಧ ಸಂಶೋಧನಾ ಸೌಲಭ್ಯಗಳಿಗೆ ಭೇಟಿ ನೀಡುವ ಅವಕಾಶವನ್ನು ಹೊಂದಿದ್ದರು.

Hosadigantha, Date:30/08/24, p.02